ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ಬಡ ಮತ್ತು ಮಧ್ಯಮ ವರ್ಗದವರಿಗೆ ಪಡಿತರ ಸರಿಯಾಗಿ ದೊರಕಿಸಿಕೊಡುವ ಬಗ್ಗೆ

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-

992(1094) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಲಾಕ್‌ಡೌನ್ ಸಮಯದಲ್ಲಿ ಬಡ ಮತ್ತು ಮಧ್ಯಮ ಮಾರ್ಗದವರಿಗೆ ಸರ್ಕಾರದ ವತಿಯಿಂದ ಒದಗಿಸಲಾದ ಪಡಿತರವು ಸೂಕ್ತ ಫಲಾನುಭವಿಗಳಿಗೆ ದೊರಕಿದೆಯೇ ;

(ಆ) ಸೂಕ್ತ ಫಲಾನುಭವಿಗಳಿಗೆ ಪಡಿತರವು ಸಿಗದೇ ದಲ್ಲಾಳಿ ಹಾಗೂ ಪ್ರಭಾವಿಗಳಿಗೆ ಮಾತ್ರ ಹೆಚ್ಚಾಗಿ ದೊರಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಇದರಲ್ಲಿ ಏನಾದರೂ ಅವ್ಯವಹಾರ ನಡೆದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ;

(ಈ) ಸೂಕ್ತ ಫಲಾನುಭವಿಗಳಿಗೆ ಸರಿಯಾದ ರೀತಿಯಲ್ಲಿ ಪಡಿತರವು ದೊರಕಿರುತ್ತದೆಯೇ ? (ಅವರುಗಳ ವಿವರ ನೀಡುವುದು)